# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:–** ಶ್ರೀ ಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎ.ನಟರಾಜು, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ–ವಿಭಾಗ, ತರೀಕೆರೆ ಹಾಗೂ ಶ್ರೀ ಇ.ಆರ್.ಹಾಲಪ್ಪ, ಹಿಂದಿನ ಕಾರ್ಯದರ್ಶಿ ಗ್ರೇಡ್–2, ಬೇಲೇನಹಳ್ಳಿ ಗ್ರಾಮ ಪಂಚಾಯತಿ ಇವರುಗಳ ವಿರುದ್ಧ ಮಾಡಿರುವ ಆರೋಪಗಳಿಂದ ದೋಷಮುಕ್ತಗೊಳಿಸುವ ಬಗ್ಗೆ – ಆದೇಶ.

**ಓದಲಾಗಿದೆ.**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರ ಪತ್ರ ಸಂಖ್ಯೆ: ಜಿಪಂಚಿ / ಆ / ಸಿಸಿಎ / ಸಿಆರ್–04 / 2009–10, ದಿನಾಂಕ: 6–08–2009 ಮತ್ತು 15–04–2010.
2. ಕಾರಣ ಕೇಳುವ ನೋಟೀಸ್ ಜಾರಿ ಮಾಡಿದ ದಿನಾಂಕ: 27–10–2009.
3. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 135 ಜಿಪಅ 2009, ದಿನಾಂಕ. 17–06–2010.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರ ಪತ್ರ ಸಂಖ್ಯೆ: ಜಿಪಂಚಿ / ಆ1 /ಸಿಸಿಎ / ಸಿಆರ್–18 / 2006–07, ದಿನಾಂಕ: 16–07–2010.
5. ಸರ್ಕಾರದ ಪತ್ರ ಸಂಖ್ಯೆ. ಗ್ರಾಅಪ 135 ಜಿಪಅ 2009, ದಿನಾಂಕ : 10–01–2011.
6. ವಿಚಾರಣಾಧಿಕಾರಿಯವರ ವರದಿಯ ದಿನಾಂಕ : 22–06–2012.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ದಿನಾಂಕಗಳಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ರವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, 2005–06ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆ, ತರೀಕೆರೆ ತಾಲ್ಲೂಕು ಪಂಚಾಯತಿಯ ವ್ಯಾಪ್ತಿಯಲ್ಲಿ ಬರುವ ಬೇಲೇನಹಳ್ಳಿ ಗ್ರಾಮ ಪಂಚಾಯತಿಯ ಹಿರೇಕಾತೂರು ಗ್ರಾಮದಲ್ಲಿ ಹಾಗೂ ಸಿದ್ದರಹಳ್ಳಿ ಗ್ರಾಮ ಪಂಚಾಯತಿಯ ಸಿಡುಕನಹಳ್ಳಿ ಗ್ರಾಮದಲ್ಲಿ ಕೆರೆ ಹೂಳು ತೆಗೆಯುವ ಕಾಮಗಾರಿಗಳಲ್ಲಿ ಅಕ್ರಮವೆಸಗಿ ಸರ್ಕಾರದ ಹಣವನ್ನು ದುರುಪಯೋಗಪಡಿಸಿಕೊಂಡಿದ್ದಾರೆಂಬ ಆರೋಪಗಳಿಗಾಗಿ ಈ ಕೆಳಕಂಡ ಅಧಿಕಾರಿ / ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಕರಡು ದೋಷಾರೋಪಣಾ ಪಟ್ಟಿಯನ್ನು ಅನುಬಂಧ 1 ರಿಂದ 4ರಲ್ಲಿ ತಯಾರಿಸಿ ಸರ್ಕಾರಕ್ಕೆ ಸಲ್ಲಿಸಿದ್ದರು.

--2

1. ಶ್ರೀ ಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ತರೀಕೆರೆ.
2. ಶ್ರೀ ಎ.ನಟರಾಜು, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ತರೀಕೆರೆ.
3. ಶ್ರೀ ಇ.ಆರ್.ಹಾಲಪ್ಪ, ಹಿಂದಿನ ಕಾರ್ಯದರ್ಶಿ ಗ್ರೇಡ್-2, ಬೇಲೇನಹಳ್ಳಿ ಗ್ರಾಮ ಪಂಚಾಯತಿ, ತರೀಕೆರೆ ತಾಲ್ಲೂಕು.
4. ಶ್ರೀ ಹೆಚ್.ಎಂ.ಕರೀಸಿದ್ದಪ್ಪ, ಹಿಂದಿನ ಕಾರ್ಯದರ್ಶಿ ಗ್ರೇಡ್-2, ಸಿದ್ಧರಹಳ್ಳಿ ಗ್ರಾಮ ಪಂಚಾಯತಿ, ತರೀಕೆರೆ ತಾಲ್ಲೂಕು.

ಮೇಲೆ ಓದಲಾದ (2)ರಲ್ಲಿ ದಿನಾಂಕ: 27-10-2009ರಲ್ಲಿ ಮೇಲಿನ ನಾಲ್ಕು ಮಂದಿ ಆರೋಪಿತರಿಗೆ ಕಾರಣ ಕೇಳುವ ನೋಟೀಸಿನೊಂದಿಗೆ ದೋಷರೋಪಣಾ ಪಟ್ಟಿಯನ್ನು ಅನುಬಂಧ 1 ರಿಂದ 4ನ್ನು ಜಾರಿ ಮಾಡಲಾಗಿತ್ತು. ಇವರುಗಳು ಸಲ್ಲಿಸಿರುವ ಲಿಖಿತ ಹೇಳಿಕೆಗಳಲ್ಲಿ ತಮ್ಮ ಮೇಲಿನ ಆರೋಪಗಳನ್ನು ನಿರಾಕರಿಸಿರುವುದರಿಂದ, ಸತ್ಯಾ ಸತ್ಯತೆಯನ್ನರಿಯುವ ದೃಷ್ಟಿಯಿಂದ ಅವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಮೇಲೆ ಓದಲಾದ (3)ರಲ್ಲಿ ದಿನಾಂಕ: 17-06-2010ರಲ್ಲಿ ಕರ್ನಾಟಕ ಸರ್ಕಾರಿ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-11ರಲ್ಲಿ ನಿಗದಿಪಡಿಸಲಾದ ವಿಧಿ ವಿಧಾನಗಳನ್ನನುಸರಿಸಿ ನಿಯಮ-13ರನ್ವಯ ವಿವರವಾದ ಜಂಟಿ ಇಲಾಖಾ ವಿಚಾರಣೆ ನಡೆಸಲು ನಿಯಮ-11(2)ರ ರೀತ್ಯಾ ಶ್ರೀ ಸೋಸಲೆ ಇಂದೂಧರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ನಿಯಮ-11(5)ರೀತ್ಯಾ ಸಹಾಯಕ ಕಾರ್ಯದರ್ಶಿ (ಆಡಳಿತ), ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ (4)ರಲ್ಲಿ ದಿನಾಂಕ: 16-07-2010ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾಪಂಚಾಯತ್, ಚಿಕ್ಕಮಗಳೂರುರವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಶ್ರೀ ಹೆಚ್.ಎಂ.ಕರಿಸಿದ್ದಪ್ಪ, ಕಾರ್ಯದರ್ಶಿ ಗ್ರೇಡ್-2, ಸದ್ಧರಹಳ್ಳಿ ಗ್ರಾಮ ಪಂಚಾಯತಿ ಇವರ ವಿರುದ್ಧದ ಆರೋಪವು ಪ್ರತ್ಯೇಕವಾಗಿರುವುದರಿಂದ ಹಾಗೂ ಅವರ ಮೇಲೆ ಶಿಸ್ತು ಕ್ರಮಕೈಗೊಳ್ಳಲು ಸಕ್ಷಮ ಪ್ರಾಧಿಕಾರ ತಾವೇ ಅಧಿಕಾರ ಹೊಂದಿರುವುದರಿಂದ ಅವರ ಹೆಸರನ್ನು ದಿನಾಂಕ: 17-06-2010ರ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 135 ಜಿಪಅ 2009ರಲ್ಲಿ ನಡೆಸುತ್ತಿರುವ ಇಲಾಖಾ ವಿಚಾರಣೆಯಿಂದ ಕೈಬಿಡಲು ಕೋರಿರುತ್ತಾರೆ. ಈ ಬಗ್ಗೆ ಪರಿಶೀಲಿಸಿ, ಮೇಲೆ ಓದಲಾದ (5)ರಲ್ಲಿ ದಿನಾಂಕ: 10-01-2011ರ ಪತ್ರದಲ್ಲಿ ಸದರಿ ನೌಕರರ ವಿರುದ್ಧದ ಇಲಾಖಾ ವಿಚಾರಣೆಯನ್ನು ಕೈಬಿಡಲಾಗಿದೆಂದು ತಿಳಿಸಲಾಗಿದೆ.

--3

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆ ಜರುಗಿಸಿ, ಮೇಲೆ ಓದಲಾದ (6)ರಲ್ಲಿ ದಿನಾಂಕ: 22-06-2012ರಂದು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಮೇಲ್ಕಂಡ ಆರೋಪಿತರು ಅವರ ಮೇಲಾಧಿಕಾರಿಗಳ ಆದೇಶದ ಪ್ರಕಾರ ಕ್ರಮ ವಹಿಸಿರುವುದ ಕಂಡು ಬಂದಿರುವುದರಿಂದ ಆರೋಪಿತರ ಮೇಲೆ ಹೊರಿಸಲಾಗಿರುವ ಆರೋಪಗಳು ರುಜುವಾತಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ. ವಿಚಾರಣಾಧಿಕಾರಿಯವರ ವರದಿಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಅಂಗಿಕರಿಸಲಾಗಿರುವುದರಿಂದ, ಶ್ರೀ ಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎ.ನಟರಾಜು, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ತರೀಕೆರೆ ಹಾಗೂ ಶ್ರೀ ಇ.ಆರ್.ಹಾಲಪ್ಪ, ಹಿಂದಿನ ಕಾರ್ಯದರ್ಶಿ ಗ್ರೇಡ್-2, ಬೇಲೇನಹಳ್ಳಿ ಗ್ರಾಮ ಪಂಚಾಯತಿ, ತರೀಕೆರೆ ತಾಲ್ಲೂಕು ಇವರುಗಳ ವಿರುದ್ಧ ಮೇಲೆ ಓದಲಾದ (2)ರಲ್ಲಿ ಮಾಡಿರುವ ಆರೋಪಗಳಿಂದ ದೋಷಮುಕ್ತಗೊಳಿಸಿ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

**<u>ಆದೇಶ ಸಂಖ್ಯೆ ಗ್ರಾಅಪ 135 ಜಿಪಅ 2009, ಬೆಂಗಳೂರು ದಿನಾಂಕ . 16-01-2013</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, 2005-06ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆ, ತರೀಕೆರೆ ತಾಲ್ಲೂಕು ಪಂಚಾಯತಿಯ ವ್ಯಾಪ್ತಿಯಲ್ಲಿ ಬರುವ ಬೇಲೇನಹಳ್ಳಿ ಗ್ರಾಮ ಪಂಚಾಯತಿಯ ಹಿರೇಕಾತೂರು ಗ್ರಾಮದಲ್ಲಿ ಹಾಗೂ ಸಿದ್ದರಹಳ್ಳಿ ಗ್ರಾಮ ಪಂಚಾಯತಿಯ ಸಿಡುಕನಹಳ್ಳಿ ಗ್ರಾಮದಲ್ಲಿ ಕೆರೆ ಹೂಳು ತೆಗೆಯುವ ಕಾಮಗಾರಿಗಳಲ್ಲಿ ಅಕ್ರಮವೆಸಗಿ ಸರ್ಕಾರದ ಹಣವನ್ನು ದುರುಪಯೋಗಪಡಿಸಿಕೊಂಡಿದ್ದಾರೆಂಬ ಆರೋಪಗಳಿಗಾಗಿ ಶ್ರೀ ಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎ.ನಟರಾಜು, ಅಂದಿನ ಕಿರಿಯ ಇಂಜಿನಿಯರ್ (ಹಾಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್), ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ತರೀಕೆರೆ ಹಾಗೂ ಶ್ರೀ ಇ.ಆರ್.ಹಾಲಪ್ಪ, ಹಿಂದಿನ ಕಾರ್ಯದರ್ಶಿ ಗ್ರೇಡ್-2, ಬೇಲೇನಹಳ್ಳಿ ಗ್ರಾಮ ಪಂಚಾಯತಿ, ತರೀಕೆರೆ ತಾಲ್ಲೂಕು ಇವರುಗಳ ವಿರುದ್ಧ ಮಾಡಲಾಗಿರುವ ಆರೋಪಗಳಿಂದ ದೋಷಮುಕ್ತಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

16/01/13

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ
3. ಮುಖ್ಯ ಇಂಜಿನಿಯರ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು.

5. ಸಂಬಂಧಿಸಿದ ಅಧಿಕಾರಿ / ನೌಕರರಿಗೆ.
6. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ. (ಸೇವೆಗಳು-- ಎ ಮತ್ತು ಸಿ).
7. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಅಪರ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
8. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ (ಸೇವೆಗಳು-ಬಿ)
9. ಮೇಲ್ವಿಚಾರಕರು, ಗಣಕಕೇಂದ್ರ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟಿನಲ್ಲಿ ಪ್ರಕಟಿಸಲು ಕಳುಹಿಸಿದೆ.
10. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.-